C.No - 2361333
C.No - 2360119

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಸಾರ್ವಜನಿಕ ಉದ್ದಿಮೆಗಳ ಇಲಾಖೆಯ ಮುಂದುವರೆದ ಯೋಜನೆಗಳಲ್ಲೊಂದಾದ 2020-21 ಸಾಲಿನಲ್ಲಿ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ" ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂಖ್ಯೆ: ಸಾಉಇ 23 ಎಸ್‌ಪಿಯು 2009, ಬೆಂಗಳೂರು, ದಿನಾಂಕ:04-04-2009.

2. ಸರ್ಕಾರಿ ಆದೇಶ ಸಂಖ್ಯೆ: ಸಾಉಇ 17 ಎಆರ್ ಯು 2020, ಬೆಂಗಳೂರು, ದಿನಾಂಕ:11-11-2020.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ: 27-01-2021 ರಂದು ನಡೆದ ಸಭೆಯ ನಡವಳಿಗಳು.

**ಪ್ರಸ್ತಾವನೆ:**

ರಾಜ್ಯದ ಸಾರ್ವಜನಿಕ ಉದ್ದಿಮೆಗಳ ಕಾರ್ಯಕ್ಷಮತೆಯನ್ನು ಪ್ರೋತ್ಸಾಹಿಸಲು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಐದು ಸಾರ್ವಜನಿಕ ಉದ್ದಿಮೆಗಳಿಗೆ ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಪ್ರತೀ ವರ್ಷ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ"ಯನ್ನು ನೀಡಲು ನಿರ್ಧರಿಸಲಾಗಿದೆ.

ಸಾರ್ವಜನಿಕ ಉದ್ದಿಮೆಗಳ ಇಲಾಖೆಯ 2020-21ನೇ ಸಾಲಿನ ಮುಂದುವರೆದ ಯೋಜನೆಯಡಿ ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಅತಿ ಉತ್ತಮವಾಗಿ ಕಾರ್ಯನಿರ್ವಹಿಸುವ 05 ಸಾರ್ವಜನಿಕ ಉದ್ದಿಮೆಗಳಿಗೆ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ"ಯನ್ನು ತಲಾ ರೂ.10.00 ಲಕ್ಷಗಳಂತೆ ನೀಡಲು ರೂ. 50.00 ಲಕ್ಷಗಳನ್ನು (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಲೆಕ್ಕ ಶೀರ್ಷಿಕೆ 3451-00-091-0-01-015 (ಪೂರಕ ವೆಚ್ಚಗಳು)ರಡಿಯಲ್ಲಿ ಒದಗಿಸಲಾಗಿದೆ.

ಮೇಲೆ (3) ರಲ್ಲಿ ಓದಲಾದ ಸಭಾ ನಡವಳಿಯನ್ವಯ, ಕರ್ನಾಟಕದ ಸಾರ್ವಜನಿಕ ಉದ್ದಿಮೆಗಳ ಕಾರ್ಯದಕ್ಷತೆಯನ್ನು ಹೆಚ್ಚಿಸಲು ಉತ್ತೇಜನ ನೀಡುವ ಸಲುವಾಗಿ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ"ಯನ್ನು ಆಯ್ಕೆ ಮಾಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆರವರ ಅಧ್ಯಕ್ಷತೆಯಲ್ಲಿ ದಿನಾಂಕ:27-01-2021 ರಂದು ನಡೆದ ಸಭೆಯಲ್ಲಿ ಈ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು. ಪ್ರಶಸ್ತಿಗೆ ಉದ್ದಿಮೆಗಳನ್ನು ಆಯ್ಕೆ ಮಾಡಲು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲು ತೀರ್ಮಾನಿಸಲಾಯಿತು

ಅ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ನಿರಂತರ ಲಾಭಗಳಿಸಿರಬೇಕು.

ಆ) ಸಂಚಿತ ನಷ್ಟ ಇರಬಾರದು

ಇ) ಸರ್ಕಾರಕ್ಕೆ ಡಿವಿಡೆಂಡ್ ಪಾವತಿಸಿರಬೇಕು

ಈ) ಗಮನಾರ್ಹ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ(ಸಿ.ಎಸ್.ಆರ್) ಚಟುವಟಿಕೆಗಳನ್ನು ಪ್ರತಿ ಸಾಲಿನಲ್ಲಿಯೂ ಕೈಗೊಂಡಿರಬೇಕು

ಹೊರಡಿಸಿದೆ
9/3/2024

...2/

ಮೇಲಿನ ಎಲ್ಲಾ ಷರತ್ತುಗಳನ್ನು ಬಹುತೇಕ ಮಟ್ಟಿಗೆ ಯಶಸ್ವಿಯಾಗಿ ಪೂರೈಸಿದ ಉದ್ದಿಮೆಗಳನ್ನು ಪರಿಗಣಿಸಿ ಅವುಗಳಲ್ಲಿ 2020-21ನೇ ಸಾಲಿಗೆ ಈ ಕೆಳಕಂಡ 5 ಉದ್ದಿಮೆಗಳಿಗೆ ತಲಾ ರೂ.10.00ಲಕ್ಷಗಳನ್ನು (ಹತ್ತು ಲಕ್ಷ ರೂಪಾಯಿಗಳು ಮಾತ್ರ) ಒಳಗೊಂಡ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ"ಯನ್ನು ನೀಡಲು ಶಿಫಾರಸ್ಸು/ಆಯ್ಕೆ ಮಾಡಲಾಯಿತು.

| ಕ್ರ.ಸಂ. | ಕ್ಷೇತ್ರದ ವಿವರ | ಪ್ರಶಸ್ತಿಗೆ ಆಯ್ಕೆಯಾದ ಉದ್ದಿಮೆಗಳ ವಿವರ | ಪ್ರಶಸ್ತಿಯ ಮೊತ್ತ |
|---|---|---|---|
| 1 | ಖನಿಜ | ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ | ರೂ.10.00 ಲಕ್ಷ |
| 2 | ಉತ್ಪಾದನಾ | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ | ರೂ.10.00 ಲಕ್ಷ |
| 3 | ಉತ್ಪಾದನೆ ಮತ್ತು ವ್ಯಾಪಾರ | ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ | ರೂ.10.00 ಲಕ್ಷ |
| 4 | ಮಾರುಕಟ್ಟೆ ಮತ್ತು ವ್ಯಾಪಾರ | ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ | ರೂ.10.00 ಲಕ್ಷ |
| 5 | ಮಾರುಕಟ್ಟೆ ಮತ್ತು ವ್ಯಾಪಾರ | ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್. | ರೂ.10.00 ಲಕ್ಷ |
| | ಒಟ್ಟು | - | **ರೂ.50.00 ಲಕ್ಷ** |

ಅದರಂತೆ ಈ ಕೆಳಗಿನ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಸಾಉಇ 33 ಎಆರ್ ಯು 2020**

**ಬೆಂಗಳೂರು, ದಿನಾಂಕ:4-03-2021**

ಕರ್ನಾಟಕದ ಸಾರ್ವಜನಿಕ ಉದ್ದಿಮೆಗಳ ಕಾರ್ಯದಕ್ಷತೆಯನ್ನು ಹೆಚ್ಚಿಸಿ ಉತ್ತೇಜನ ನೀಡುವ ಸಲುವಾಗಿ ಈ ಕೆಳಕಂಡ 5 ಸಾರ್ವಜನಿಕ ಉದ್ದಿಮೆಗಳಿಗೆ ತಲಾ ರೂ.10.00ಲಕ್ಷ (ಹತ್ತು ಲಕ್ಷ ರೂಪಾಯಿಗಳು ಮಾತ್ರ) ಒಳಗೊಂಡ "ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿ"ಯನ್ನು ನೀಡಲು ಆದೇಶಿಸಲಾಗಿದೆ.

| ಕ್ರ.ಸಂ. | ಕ್ಷೇತ್ರದ ವಿವರ | ಪ್ರಶಸ್ತಿಗೆ ಆಯ್ಕೆಯಾದ ಉದ್ದಿಮೆಗಳ ವಿವರ | ಪ್ರಶಸ್ತಿಯ ಮೊತ್ತ |
|---|---|---|---|
| 1 | ಖನಿಜ | ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ | ರೂ.10.00 ಲಕ್ಷ |
| 2 | ಉತ್ಪಾದನಾ | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ | ರೂ.10.00 ಲಕ್ಷ |
| 3 | ಉತ್ಪಾದನೆ ಮತ್ತು ವ್ಯಾಪಾರ | ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ | ರೂ.10.00 ಲಕ್ಷ |
| 4 | ಮಾರುಕಟ್ಟೆ ಮತ್ತು ವ್ಯಾಪಾರ | ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ | ರೂ.10.00 ಲಕ್ಷ |
| 5 | ಮಾರುಕಟ್ಟೆ ಮತ್ತು ವ್ಯಾಪಾರ | ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್. | ರೂ.10.00 ಲಕ್ಷ |
| | ಒಟ್ಟು | - | **ರೂ.50.00 ಲಕ್ಷ** |

...3/

ಈ ಬಗ್ಗೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 3451-00-091-0-01-015(ಪೂರಕ ವೆಚ್ಚಗಳು) ರಲ್ಲಿ ಭರಿಸತಕ್ಕದ್ದು.

ಪ್ರಶಸ್ತಿಗೆ ಆಯ್ಕೆಯಾದ ಮೇಲಿನ 05 ಉದ್ದಿಮೆಗಳ ವ್ಯವಸ್ಥಾಪಕ ನಿರ್ದೇಶಕರುಗಳು ನಿಯಮಾನುಸಾರ ಮುಂಗಡ ಹಣ ಪಾವತಿಸುವ ರಸೀದಿಯನ್ನು (Pre-Receipt) ಒದಗಿಸತಕ್ಕದ್ದು ಹಾಗೂ ಪ್ರಶಸ್ತಿ ಹಣ ನಿಗದಿತ ಖಾತೆಯಲ್ಲಿ ಜಮಾ ಆಗಿರುವ ಬಗ್ಗೆ ಖಚಿತಪಡಿಸಿಕೊಂಡು ದೃಢೀಕರಣ ಪತ್ರ ನೀಡುವುದು. ಸದರಿ ಮೊತ್ತವನ್ನು ಉದ್ದಿಮೆಯ ಎಲ್ಲಾ ಉದ್ಯೋಗಿಗಳ ಕ್ಷೇಮಾಭ್ಯುದಯಕ್ಕೆ ಉಪಯೋಗಿಸಲು ಆಡಳಿತ ಮಂಡಳಿಯು ಸೂಕ್ತ ಕ್ರಮ ಕೈಗೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2020, ದಿನಾಂಕ:24-11-2020ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಪ್ರತ್ಯಾಯೋಜನೆಯ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

M-Gopalakri
(ಎಂ.ಗೋಪಾಲ ಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಾರ್ವಜನಿಕ ಉದ್ದಿಮೆಗಳ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
3. ಸನ್ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
4. ಮಾನ್ಯ ಸಾರ್ವಜನಿಕ ಉದ್ದಿಮೆಗಳ ಸಚಿವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ/ಯೋಜನಾ ಇಲಾಖೆ.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರ್ವಜನಿಕ ಉದ್ದಿಮೆಗಳ ಇಲಾಖೆ.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್.
9. ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ.
12. ವ್ಯವಸ್ಥಾಪಕ ನಿರ್ದೇಶಕರು, ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್.

13. ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ .
14. ಅಧ್ಯಕ್ಷರು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ.
15. ಅಧ್ಯಕ್ಷರು, ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ.
16. ಅಧ್ಯಕ್ಷರು, ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತ.
17. ಅಧ್ಯಕ್ಷರು, ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್.
18. ವ್ಯವಸ್ಥಾಪಕ ನಿರ್ದೇಶಕರು ಮತ್ತು ಅಧ್ಯಕ್ಷರು, 55 ಸಾರ್ವಜನಿಕ ಉದ್ದಿಮೆಗಳು.
19. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರ್ವಜನಿಕ ಉದ್ದಿಮೆಗಳ ಇಲಾಖೆ.
20. ನಿರ್ದೇಶಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು
21. ಸರ್ಕಾರದ ಅಧೀನ ಕಾರ್ಯದರ್ಶಿ,ವೆಚ್ಚ-1 ಮತ್ತು ಬಂಡವಾಳ ಹೂಡಿಕೆ, ಆರ್ಥಿಕ ಇಲಾಖೆ.
22. ಸರ್ಕಾರದ ಅಧೀನ ಕಾರ್ಯದರ್ಶಿ, ಸಿ.ಆ.ಸು. ಇಲಾಖೆ(ಲೆಕ್ಕಪತ್ರ, 1/2)
23. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

4/3/21

04 MAR

ಟಪಾಲ್ / TAPPAL

Office of the Accountant General (A & E) Karnataka, Main Building, Bangalore-0..